ಆ) ಈ ನ್ಯಾಯಾಲಯಕ್ಕೆ ಸ್ವಂತ ಕಟ್ಟಡ ಹೊಂದಲು ಸರ್ಕಾರ ಉದ್ದೇಶಿಸಿದೆಯೇ?

ಇ) ಸರ್ಕಾರದವರು ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

ಈ) ಈ ನ್ಯಾಯಾಲಯವನ್ನು ಪ್ರಸ್ತುತವಾಗಿ ಕೆಲಸ ನಿರ್ವಹಿಸುತ್ತಿರುವ ಕಟ್ಟಡದಿಂದ ಸಣ್ಣ ನೀರಾವರಿ ಇಲಾಖೆಯ ಖಾಲಿ ಕಟ್ಟಡಕ್ಕೆ ಸ್ಥಳಾಂತರಿಸಲು ಸರ್ಕಾರವು ಉದ್ದೇಶಿಸಿದಿಯೇ? ಹಾಗಿದ್ದರೆ ಈ ಬಗ್ಗೆ ಕೈಗೊಂಡಿರುವ ಕ್ರಮವೇನು?

ಶ್ರೀ ಡಿ.ಬಿ.ಚಂದ್ರೇಗೌಡ (ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು):

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಹೌದು: ಈ ನ್ಯಾಯಾಲಯಕ್ಕೆ ಸ್ವಂತ ಕಟ್ಟಡ ಹೊಂದಲು ಸರ್ಕಾರಕ್ಕೆ ಉದ್ದೇಶವಿದೆ.

ಇ) ಈ ಕಾಮಗಾರಿಗಾಗಿ ಅಗತ್ಯವಾದ 133 ಲಕ್ಷರೂಗಳ ನಕ್ಷೆ ಮತ್ತು ಅಂದಾಜನ್ನು ಸಿದ್ದಪಡಿಸಿದ್ದು ಪ್ರಸಕ್ತ ಸಾಲಿನಲ್ಲಿ ಇದಕ್ಕಾಗಿ ಅನುದಾನ ಇಲ್ಲದಿರುವ ಕಾರಣ, ಅಗತ್ಯ ಅನುದಾನವನ್ನು ಮುಂದಿನ ಸಾಲಿನ ಆಯವ್ಯಯದಲ್ಲಿ ಒದಗಿಸಲು ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ನೀರಾವರಿ ಇಲಾಖೆಗೆ ಸೇರಿದ ಖಾಲಿ ಕಟ್ಟಡಕ್ಕೆ ನ್ಯಾಯಾಲಯದ ಕಟ್ಟಡವನ್ನು ಸ್ಥಳಾಂತರಿಸಲು ಉದ್ದೇಶಿಸಿದ್ದರೂ, ಸದರೀ ಕಟ್ಟಡವು ಸ್ವಂತ ಉಪಯೋಗಕ್ಕಾಗಿ ಬೇಕಾಗಿದಯೆಂದು ನೀರಾವರಿ ಇಲಾಖೆಯು ತಿಳಿಸಿರುವ ಕಾರಣ ಈ ದಿಸೆಯಲ್ಲಿ ಮುಂದಿನ ಕ್ರಮ ಜರುಗಿಸಲಾಗುತ್ತಿಲ್ಲ.

ಗುಂಡ್ಲುಪೇಟೆ ತಾಲ್ಲೂಕಿನ ಪ್ರವಾಸ ಕೇಂದ್ರಗಳು.

59(47).

ಶ್ರೀ. ಹೆಚ್.ಎಸ್.ಮಹಾದೇವ ಪ್ರಸಾದ್ (ಗುಂಡ್ಲುಪೇಟೆ): ಮಾನ್ಯ ಪ್ರವಾಸೋದ್ಯಮ ಹಾಗೂ ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೆ?

ಅ) ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಪ್ರವಾಸಿ ಕೇಂದ್ರಗಳನ್ನಾಗಿ ಯಾವ ಯಾವ ಸ್ಥಳವನ್ನು ಗುರುತಿಸಲಾಗಿದೆ?

ಆ) ಅವುಗಳ ಅಭಿವೃದ್ಧಿಗೆ ಈವರೆಗೆ ಕೈಗೊಂಡಿರುವ ಕ್ರಮಗಳೇನು?

ಇ) ಹಿಮದ್ ಗೋಪಾಲಸ್ವಾಮಿ ಬೆಟ್ಟವನ್ನು ಪ್ರವಾಸಿ ಕೇಂದ್ರವನ್ನಾಗಿ ಮಾಡಲು ಉದ್ದೇಶಿಸಿದೆಯೇ?

ಶ್ರೀ ಆರ್.ರೋಷನ ಬೇಗ್ (ಪ್ರವಾಸೋದ್ಯಮ ಹಾಗೂ ಹಜ್ ಸಚಿವರು):

ಅ) ಗುಂಡ್ಲುಪೇಟೆ ತಾಲ್ಲೂಕಿನ ಹಿಮದ್ ಗೋಪಾಲಸ್ವಾಮಿ ಬೆಟ್ಟವನ್ನು ಪ್ರವಾಸಿ ಕೇಂದ್ರವಾಗಿ ಗುರುತಿಸಲಾಗಿದೆ.

ಆ) ಹಿಮದ್ ಗೋಪಾಲಸ್ವಾಮಿ ಬೆಟ್ಟದ ಬಗ್ಗೆ ಪ್ರವಾಸಿ ಮಡಿಕೆಗಳಲ್ಲಿ ಮಾಹಿತಿ ಒದಗಿಸಲಾಗಿದೆ.

ಇ) ಈಗಾಗಲೇ ಹಿಮದ್ ಗೋಪಾಲಸ್ವಾಮಿ ಬೆಟ್ಟವನ್ನು ಪ್ರವಾಸಿ ಕೇಂದ್ರವನ್ನಾಗಿ ಗುರುತಿಸಲಾಗಿದೆ.

Roads taken in Gundlupet Taluk Under Nabard Scheme

60(48)

Sri Mahadev Prasad (Gundlupet): Honourable Minister for public works ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೆ?

a) How many roads are taken up under NABARD scheme in Gundlupet taluk?

b) Out of these, how many works are started?

c) How many works are completed?

SRI DHARAM SINGH(Minister for Public Works.):

a) Under P.W.D. 6 road works amounting to Rs.164 lakhs are taken up.